5117 (5341) ಶ್ರೀ ಕಟ್ಟಾ ಸುಬ್ರಹ್ಮಣ್ಯ ನಾಯ್ಡು (ಶಿವಾಜಿನಗರ): ಮಾನ್ಯ ಸಮಾಜ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಪರಿಶಿಷ್ಟ ಜಾತಿ: ಪಂಗಡಗಳ ಅಭಿವೃದ್ಧಿ ನಿಗಮದ ಮೇಲೆ ಲೋಕಯುಕ್ತರವರು ದಾಳಿ ನಡೆಸಿದ್ದು ಯಾವಾಗ?

ಆ) ದಾಳಿ ಸಂದರ್ಭದಲ್ಲಿ ಪತ್ತೆ ಹಚ್ಚಲಾದ ಅಕ್ರಮಗಳು ಯಾವುವು: (ವಿವರ ನೀಡುವುದು)

ಇ) ಪತ್ತೆ ಹಚ್ಚಲಾದ ಅಕ್ರಮಗಳ ಬಗ್ಗೆ ಲೋಕಾಯುಕ್ತರವರು ಸರ್ಕಾರಕ್ಕೆ ನೀಡಿರುವ ವರದಿಯ ಪ್ರಮುಖ ಅಂಶಗಳೇನು:

ಈ) ಲೋಕಾಯುಕ್ತರವರ ವರದಿಯಾಧಾರದ ಮೇಲೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು:

ಉ) ಇದುವರೆಗೂ ಎಷ್ಟು ಜನ ಅದಿಕಾರಿಗಳ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ?

ಡಾ: ವೈ. ನಾಗಪ್ಪ (ಮಾನ್ಯ ಸಮಾಜ ಕಲ್ಯಾಣ ಸಚಿವರು) :

ಅ) ದಿನಾಂಕ: 17–03–05 ರಂದು ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಅಭಿವೃದ್ಧಿ ನಿಗಮದ ಬೆಂಗಳೂರು ಕೇಂದ್ರ ಕಚೇರಿಗೆ ಮಾನ್ಯ ಲೋಕಯುಕ್ತರು ಭೇಟಿ ನೀಡಿದ್ದಾರೆ.

ಆ) ಮಾನ್ಯ ಲೋಕಾಯುಕ್ತರು ನಿಗಮದ ಕೆಲಸ ಕಾರ್ಯಗಳ ಹಾಗೂ ಯೋಜನೆಗಳ ಅನುಷ್ಠಾನದ ಬಗ್ಗೆ ಕಡತಗಳನ್ನು ಪರಿಶೀಲಿಸಿದ್ದು, ನಿರ್ದಿಷ್ಟವಾಗಿ ಬೆಂಗಳೂರು ನಗರ ಜಿಲ್ಲೆಗೆ ಸಂಬಂಧಪಟ್ಟ ಆಟೋರಿಕ್ಷಾ ಹಗರಣದ ಹೊರತಾಗಿ ಇನ್ನಾವುದೇ ಅಕ್ರಮಗಳನ್ನು ಪ್ರಸ್ತಾಪಿಸಿರುವುದಿಲ್ಲ.

ಇ) ಈವರೆವಿಗೂ ಮಾನ್ಯ ಲೋಕಾಯುಕ್ತರಿಂದ ಯಾವುದೇ ಲಿಖಿತ ವರದಿ ಬಂದಿರುವುದಿಲ್ಲ.

ಈ) ಉದ್ಭವಿಸುವುದಿಲ್ಲ.

ಉ) ಉದ್ಭವಿಸುವುದಿಲ್ಲ.

5118 (5749) ಶ್ರೀ ಕೃಷ್ಣ ಪಾಲೇಮಾರ್ ಜೆ. (ಸುರತ್ಕಲ್): ಮಾನ್ಯ ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಕರ್ಯ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿ ಸ್ಥಾಪಿತವಾಗಿರುವ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶಗಳಲ್ಲಿ ನಿರ್ದಿಷ್ಟ ಪ್ರಮಾಣದಲ್ಲಿ ಒದಗಿಸಿಕೊಡಬೇಕೆಂಬ ನಿಯಮವನ್ನು ಸರ್ಕಾರ ಜಾರಿಗೊಳಿಸಿಲ್ಲವೆ;

ಆ) ಸ್ಥಳೀಯರಿಗೆ ಉದ್ಯೋಗ ಅವಕಾಶವನ್ನು ಒದಗಿಸಿಕೊಡುವ ಕುರಿತು ಡಾ: ಸರೋಜಿನಿ ಮಹಿಷಿಯವರ ವರದಿಯಲ್ಲಿನ ಶಿಫಾರಸ್ಸನ್ನು ಸರ್ಕಾರ ಅನುಷ್ಠಾನಗೊಳಿಸಿಲ್ಲವೆ;

ಇ) ಹಾಗಿದ್ದಲ್ಲಿ, ಅದನ್ನು ಕಟ್ಟು ನಿಟ್ಟಾಗಿ ಜಾರಿಗೊಳಿಸಲಾಗಿದೆಯೇ;

ಈ) ಉಲ್ಲಂಘಿಸುವ ಉದ್ದಿಮೆಗಳ ಮೇಲೆ ಸರ್ಕಾರ ಕೈಗೊಂಡ ಕ್ರಮಗಳೇನು;

ಉ) ಸ್ಥಳೀಯರಿಗೆ ನಿಗಧಿತ ಪ್ರಮಾಣದಲ್ಲಿ ಕೈಗಾರಿಕೆಗಳಲ್ಲಿ ಸಿಗಬೇಕಾದ ಉದ್ಯೋಗ ಅವಕಾಶವನ್ನು ಸಮರ್ಪಕವಾದ ರೀತಿಯಲ್ಲಿ ಲಭ್ಯವಾಗುವಂತೆ ನೋಡಿಕೊಳ್ಳಲು ಸರ್ಕಾರದ ಕ್ರಮಗಳೇನು?

ಶ್ರೀ ಪಿ. ಜಿ. ಆರ್. ಸಿಂಧ್ಯಾ (ಮಾನ್ಯ ಬೃಹತ್, ಮಧ್ಯಮ, ಸಣ್ಣ ಕೈಗಾರಿಕೆ ಹಾಗೂ ಮೂಲಭೂತ ಸೌಕರ್ಯ ಸಚಿವರು) :

ಅ) ಜಾರಿಗೊಳಿಸಿದೆ.

ಆ) ಡಾ: ಸರೋಜಿನಿ ಮಹಿಷಿ ಸಮಿತಿ ವರದಿಯ ಶಿಫಾರಸ್ಸುಗಳನ್ವಯ ರಾಜ್ಯದಲ್ಲಿ ಹೊಸದಾಗಿ ಸ್ಥಾಪಿಸಲ್ಪಡುವ ಕೈಗಾರಿಕೆಗಳಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶ ನೀಡುವ ಕುರಿತು ಕೈಗಾರಿಕೆ ನೀತಿ 2001–06ರಲ್ಲಿ ಈ ಕೆಳಕಂಡ ಷರತ್ತುಗಳನ್ನು ವಿಧಿಸಲಾಗಿದೆ.

ಕಂಡಿಕೆ 8.6:– ಎಲ್ಲಾ ಹೊಸ ಕೈಗಾರಿಕಾ ಬಂಡವಾಳ ಹೂಡಿಕೆಯ ಸಾಧ್ಯವಿರುವಷ್ಟು ಅತಿ ಹೆಚ್ಚಿನ ಸಂಖ್ಯೆಯಲ್ಲಿ ಹೆಚ್ಚುವರಿ ಉದ್ಯೋಗಾವಕಾಶಗಳನ್ನು ಕಲ್ಪಿಸಬೇಕಲ್ಲದೇ, ಕನಿಷ್ಟ ಶೇಕಡ 80ರಷ್ಟು ಉದ್ಯೋಗವನ್ನು ಸ್ಥಳೀಯ ಜನರಿಗೆ ನೀಡತಕ್ಕದ್ದು. [ಸಿ ಮತ್ತು ಡಿ ಪ್ರವರ್ಗಗಳ ವಿಷಯದಲ್ಲಿ ಶೇಕಡ 100ರಷ್ಟು ಉದ್ಯೋಗ ಅವಕಾಶವನ್ನು ಸ್ಥಳೀಯ ಜನರಿಗೆ ನೀಡಬೇಕು] ಹಾಗೂ ಉತ್ತೇಜನಗಳನ್ನು ವಿತರಣೆ ಮಾಡುವಾಗ ಈ ವಿಚಾರದ ಮೇಲ್ವಿಚಾರಣೆ ನೋಡಿಕೊಳ್ಳತಕ್ಕದ್ದು. ಸ್ಥಳೀಯ ಜನರಿಗೆ ಉದ್ಯೋಗ ನೀಡುವ ಅವಶ್ಯಕತೆಯನ್ನು ಜಿಲ್ಲಾ ಕೈಗಾರಿಕಾ ಕೇಂದ್ರಗಳು 5 ವರ್ಷಗಳವರೆಗೆ ಮೇಲ್ವಿಚಾರಣೆ ಮಾಡುತ್ತವೆ. ಕೈಗಾರಿಕೆಗಳು ಸ್ಥಳೀಯಜನರಿಗೆ ಮೇಲೆ ತಿಳಿಸಿದ ನಿಬಂಧನೆಗನುಸಾರವಾಗಿ ಉದ್ಯೋಗ ನೀಡಲು ತಪ್ಪಿದಲ್ಲಿ ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಪ್ರಧಾನ ಕಾರ್ಯದರ್ಶಿಗಳು ಅಧ್ಯಕ್ಷರಾಗಿರುವ ರಾಜ್ಯಮಟ್ಟದ ಸಮಿತಿಗೆ ತಿಳಿಸಲಾಗುವುದು.

ಹಾಗೂ ಈ ಸಮಿತಿಯು ಮಂಜೂರಾದ ಬಂಡವಾಳ ಸಹಾಯ ಧನವನ್ನು ಮರುವಸೂಲಿ ಮಾಡಲು ಶಿಫಾರಸ್ಸು ಮಾಡುವುದು. ಇದಕ್ಕಾಗಿ ಸಹಾಯಧನವನ್ನು ವಿತರಣೆ ಮಾಡುವ ಮೊದಲು ಘಟಕಗಳಿಂದ ಮುಚ್ಚಳಿಕೆಯೊಂದನ್ನು ಪಡೆಯಲಾಗುವುದು. ಜೊತೆಯಲ್ಲಿ ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಜಮೀನು ಪಡೆದ ಘಟಕಗಳು ಭೂ ಸ್ವಾಧೀನದಿಂದಾಗಿ ಜಮೀನು ಕಳೆದುಕೊಂಡ ರೈತರ ಪ್ರತಿಯೊಂದು ಕುಟುಂಬದ ಒಬ್ಬ ಸದಸ್ಯರಿಗೆ ಉದ್ಯೋಗ ನೀಡಬೇಕೆಂಬ ನಿಬಂಧನೆಯನ್ನು ಸಹ ಗುತ್ತಿಗೆ ಮತ್ತು ಮಾರಾಟ ಒಪ್ಪಂದದಲ್ಲಿ ಅಳವಡಿಸಲಾಗಿದೆ.

ಇ) 50 ಅಥವಾ ಅದಕ್ಕಿಂತ ಹೆಚ್ಚು ಉದ್ಯೋಗಿಗಳನ್ನು ಹೊಂದಿರುವ ಮತ್ತು ರಾಜ್ಯ ಸರ್ಕಾರ/ ಸರ್ಕಾರಿ ಸಂಸ್ಥೆಗಳಿಂದ ಮೂಲಭೂತ ಸೌಕರ್ಯ ಹಾಗೂ ರಿಯಾಯಿತಿಗಳನ್ನು ಪಡೆದಿರುವ ಕೈಗಾರಿಕಾ ಘಟಕಗಳಲ್ಲಿ ಮೇಲ್ಕಂಡ ಷರತ್ತಿನ ಪಾಲನೆ ಬಗ್ಗೆ ಪರಿಶೀಲಿಸಲು ಜಿಲ್ಲಾ ಮಟ್ಟದಲ್ಲಿ ಜಿಲ್ಲಾದಿಕಾರಿಯವರ ಅಧ್ಯಕ್ಷತೆಯಲ್ಲಿ ಹಾಗೂ ರಾಜ್ಯಮಟ್ಟದಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯವರ ಅಧ್ಯಕ್ಷತೆಯಲ್ಲಿ ಸಮಿತಿಗಳನ್ನು ರಚಿಸಲಾಗಿದೆ.

ಈ) ಕಳೆದ 5 ವರ್ಷಗಳಲ್ಲಿ ಸ್ಥಾಪಿತಗೊಂಡ ಘಟಕಗಳ ಪೈಕಿ (ಮಾಹಿತಿ ತಂತ್ರಜ್ಞಾನ ಘಟಕಗಳನ್ನು ಹೊರತುಪಡಿಸಿ) 129 ಘಟಕಗಳು ನಿಗಧಿತ ಪ್ರಮಾಣದಲ್ಲಿ ಸ್ಥಳೀಯರಿಗೆ ಉದ್ಯೋಗಾವಕಾಶ ನೀಡದಿರುವುದು ಕಂಡು ಬಂದಿದೆ ಹಾಗೂ ಅಂತಹ ಘಟಕಗಳಿಗೆ ಈಗಾಗಲೇ ನೋಟೀಸ್ ಜಾರಿ ಮಾಡಲಾಗಿದೆ.

ಉ) ಮೇಲೆ ವಿವರಿಸಿದಂತೆ ಕಾಲಾಕಾಲಕ್ಕೆ ಹೊರಡಿಸಲಾಗುವ ಕೈಗಾರಿಕಾ ನೀತಿಯಡಿ ಸ್ಥಳೀಯರಿಗೆ ನಿಗಧಿತ ಪ್ರಮಾಣದಲ್ಲಿ ಉದ್ಯೋಗಾವಕಾಶ ನೀಡಬೇಕೆಂಬ ಷರತ್ತನ್ನು ವಿಧಿಸಲಾಗಿದ್ದು, ಸದರಿ ಷರತ್ತುಗಳ ಕಟ್ಟುನಿಟ್ಟಿನ ಅನುಷ್ಠಾನಕ್ಕೆ ಸರ್ಕಾರವು ಬದ್ಧವಾಗಿದೆ. ನಿಯಮಗಳನ್ನು ಪಾಲಿಸದ ಘಟಕಗಳಿಗೆ ನೀಡಲಾದ ಸವಲತ್ತುಗಳನ್ನು/ ರಿಯಾಯಿತಿಗಳನ್ನು ಹಿಂದಕ್ಕೆ ಪಡೆಯುವುದು ಸೇರಿದಂತೆ ಘಟಕಗಳ ವಿರುದ್ಧ ಅಗತ್ಯ ಕ್ರಮ ಜರುಗಿಸಲಾಗುವುದು.

5119 (6111) ಶ್ರೀ ಮಲ್ಲಿಕಾರ್ಜುನ್ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ): ಮಾನ್ಯ ಸಮಾಜ ಕಲ್ಯಾಣ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಸವಕಲ್ಯಾಣ ಮತ ಕ್ಷೇತ್ರ ವ್ಯಾಪ್ತಿಯಲ್ಲಿ ಹಿಂದುಳಿದ ವರ್ಗಗಳ, ಅಲ್ಪಸಂಖ್ಯಾತರ ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ಬಾಲಕ, ಬಾಲಕಿಯರ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು;